## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ<br>ಸದಸ್ಯರ ಹೆಸರು | : | 170<br>ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 14-02-2023 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳೆಷ್ಟು; ಹಾಗೂ ಅವುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತರು ಹಾಗೂ ಇತರ ಸಿಬ್ಬಂದಿಗಳೆಷ್ಟು; | ರಾಜ್ಯದಲ್ಲಿ ಒಟ್ಟು 66361 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.<br><br>64729 ಅಂಗನವಾಡಿ ಕಾರ್ಯಕರ್ತೆಯರು ಮತ್ತು 59627 ಅಂಗನವಾಡಿ ಸಹಾಯಕಿಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. |
| ಆ. | ಅಂಗನವಾಡಿ ಕಾರ್ಯಕರ್ತರು ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ತೀವ್ರ ಪ್ರತಿಭಟನೆಯನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂಗನವಾಡಿ ಕಾರ್ಯಕರ್ತರು ಸರ್ಕಾರಕ್ಕೆ ಸಲ್ಲಿಸಿರುವ ಬೇಡಿಕೆಗಳಾವುವು; | ಬಂದಿದೆ.<br><br>ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಉಪಧನ (Gratuity) ಪಾವತಿಸುವುದು, ಅಂಗನವಾಡಿ ಕೇಂದ್ರಗಳ ವೇಳಾಪಟ್ಟಿ ಬದಲಾಯಿಸುವುದು, ಯೋಜನೇತರ ಕರ್ತವ್ಯಗಳಿಗೆ ನಿಯೋಜಿಸದಿರುವುದು, ಸೇವಾ ನಿಯಮಾವಳಿ ರಚಿಸುವುದು, SSLC ಪಾಸಾದ ಸಹಾಯಕಿ / ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮುಂಬಡ್ತಿ ನೀಡುವುದು, ಕನಿಷ್ಠ ವೇತನ ಹಾಗೂ ಇ.ಎಸ್. ಐ. ಸೌಲಭ್ಯ ಒದಗಿಸುವುದು ಇತ್ಯಾದಿ ಬೇಡಿಕೆ ಸಲ್ಲಿಸಿರುತ್ತಾರೆ |
| (ಇ) | ಅಂಗನವಾಡಿ ಕಾರ್ಯಕರ್ತರು ಸಲ್ಲಿಸಿರುವ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು? | ಸರ್ಕಾರದ ಆದೇಶ ದಿನಾಂಕ: 04.02.2023 ರಲ್ಲಿ 2023-24ನೇ ಸಾಲಿನಿಂದ ಉಪಧನ (Gratuity) ಪಾವತಿಸಲು ಮಂಜೂರಾತಿ ನೀಡಲಾಗಿದೆ. ಅಂಗನವಾಡಿ ಕೇಂದ್ರಗಳ ವೇಳಾಪಟ್ಟಿಯನ್ನು ಬದಲಾಯಿಸಿ ಸುತ್ತೋಲೆ ಹೊರಡಿಸಲಾಗಿದೆ. ಯೋಜನೇತರ ಕೆಲಸಗಳಿಗೆ ನಿಯೋಜಿಸದಂತೆ ಪತ್ರ ಬರೆಯಲಾಗಿದೆ. ಸೇವಾ ನಿಯಮ ರಚಿಸಲು ಕ್ರಮ ವಹಿಸಲಾಗುತ್ತಿದೆ. SSLC ಪಾಸಾದ ಸಹಾಯಕಿಯರು / ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮುಂಬಡ್ತಿ ನೀಡಲು ತಿದ್ದುಪಡಿ ಆದೇಶ ಹೊರಡಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಸೇವೆಯು ಗೌರವ ಧನದ ಸೇವೆಯಾಗಿರುವುದರಿಂದ, ಕನಿಷ್ಠ ವೇತನ ಮತ್ತು ಇ.ಎಸ್.ಐ. ಸೌಲಭ್ಯಕ್ಕೆ ಅವಕಾಶವಿರುವುದಿಲ್ಲ. |

**ಸಂಖ್ಯೆ:ಮಮಇ 23 ಐಸಿಡಿ 2023**

Halappa

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು